**ಪಿ.ಡಬ್ಲ್ಯುಃ 1**

**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.**

**ದಿನಾಂಕಃ 08-11-2024**

**ಮುಂದುವರಿದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಜಿ.ಎಂ.ಎಂ. ವಕೀಲರಿಂದ,**

ಈ ದಿನ ನನ್ನ ಮುಂದುವರಿದ ಮುಖ್ಯ ವಿಚಾರಣೆಯಲ್ಲಿ, ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ದೃಢೀಕೃತ ಪ್ರ.ವ. ವರದಿ, ಪಿರ್ಯಾದಿ ನಕಲು, ಘಟನಾ ಸ್ಥಳದ ಪಂಚನಾಮೆ ವರದಿ ಪ್ರತಿ, ಎ.ಐ.ಆರ್. ಫಾರ್ಮ್, ಗಾಯದ ಪ್ರಮಾಣ ಪತ್ರ, ಚಾರ್ಜ್ ಶೀಟ್ ಪ್ರತಿ, ಅವುಗಳನ್ನು ಕ್ರಮವಾಗಿ ನಿಪಿ-1 ರಿಂದ ನಿಪಿ-6 ಎಂದು ಗುರುತಿಸಲಾಯಿತು. ಒಂದು ಡಿಸ್ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು ನಿಪಿ-7 ಎಂದು ಗುರುತಿಸಲಾಯಿತು. ಅಂಗನ್ಯೂನ್ಯತೆ ಪ್ರಮಾಣ ಪತ್ರ ಹಾಜರುಪಡಿಸಿದ್ದು, ಸದರಿ ದಾಖಲೆಯನ್ನು ಗುರುತಿಸಲು ಎದ್ರುದಾರರ ಪರ ವಕೀಲರು ತಕರಾರು ಮಾಡಿದ್ದು, ಆದ್ದರಿಂದ ಅದನ್ನು ಸಾಬೀತುಪಡಿಸುವ ತಕರಾರಿಗೆ ಒಳಪಟ್ಟು ನಿಪಿ-8 ಎಂದು ಗುರುತಿಸಲಾಯಿತು. 15 ವೈದ್ಯಕೀಯ ವೆಚ್ಚ ರಶೀದಿಯನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ 9 ರಿಂದ 23 ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿಯಲ್ಲಿ ಕೇಳಿಕೊಂಡಂತೆ ಪರಿಹಾರ ಕೊಡಿಸಬೇಕಾಗಿ ವಿನಂತಿ.

**ಪಾಟೀ ಸವಾಲುಃ 2ನೇ ಎದುರುದಾರರ ಪರ ಶ್ರೀ ಎಸ್.ಎಂ.ಬಿ. ವಕೀಲರಿಂದಃ-**

ನಾನು ಪ್ರಯಾಣಿಸುತ್ತಿದ್ದ ವಾಹನವು ನನ್ನ ಗೆಳೆಯನ ಮಾಲ್ಕಿಯ ವಾಹನವಾಗಿತ್ತು. ಸದರಿ ವಾಹನವನ್ನು ನನ್ನ ಗೆಳೆಯ ತಿಮ್ಮಯ್ಯ ನಾಯ್ಕ ಚಲಾಯಿಸುತ್ತಿದ್ದರು. ನಾನು ಹಿಂಬದಿಯಲ್ಲಿ ಕುಳಿತುಕೊಂಡಿದ್ದೆನು. ಅಪಘಾತವಾದ ತಕ್ಷಣ ನನ್ನನ್ನು ಭಟ್ಕಳದ ಸರಕಾರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಸದರಿ ಆಸ್ಪತ್ರೆಯಲ್ಲಿ ನಾಲ್ಕು ತಾಸುಗಳ ವರೆಗೆ ಚಿಕಿತ್ಸೆ ಪಡೆದು, ನಂತರ ಭಟ್ಕಳದ ಲೈಫ್ ಕೇರ್ ಆಸ್ಪತ್ರೆಗೆ ದಾಖಲಿಸಲಾಯಿತು. ಸದರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಿದ ವೈದ್ಯರ ಹೆಸರು ನನಗೆ ಗೊತ್ತಿಲ್ಲ. ಸರಕಾರಿ ಆಸ್ಪತ್ರೆಯಲ್ಲಿ ನನ್ನೊಂದಿಗೆ ನನ್ನ ಗೆಳೆಯ ತಿಮ್ಮಯ್ಯ ನಾಯ್ಕ ಇದ್ದರು. ಸದರಿ ಆಸ್ಪತ್ರೆಗೆ ಪೊಲೀಸರು ಬಂದಿರಲಿಲ್ಲ. ಭಟ್ಕಳದ ಸರಕಾರಿ ಆಸ್ಪತ್ರೆಯಲ್ಲಿ ಅಪಘಾತದಿಂದ ಗಾಯಗೊಂಡಿರುವುದಾಗಿ ವೈದ್ಯರ ಬಳಿ ಹೇಳಿರುತ್ತೇನೆ. ಲೈಫ್ ಕೇರ್ ಆಸ್ಪತ್ರೆಗೆ ಪೊಲೀಸರು ಬಂದಿರಲಿಲ್ಲ. ಸದರಿ ಆಸ್ಪತ್ರೆಯಲ್ಲಿದ್ದಾಗ ನನ್ನ ಭಾವ ಮತ್ತು ನನ್ನ ತಂಗಿ ಬಂದಿದ್ದರು. ಅಪಘಾತ ಹೇಗೆ ಆಯಿತು

ಎಂದು ನನ್ನ ಭಾವ ಮತ್ತು ನನ್ನ ತಂಗಿಗೆ ತಿಳಿಸಿರುತ್ತೇನೆ. ಅದನ್ನು ಆಸ್ಪತ್ರೆಯವರಿಗೂ ಸಹ ತಿಳಿಸಿರುತ್ತೇನೆ. ನಾನು 6ನೇ ತರಗತಿಯವರೆಗೆ ಓದಿರುತ್ತೇನೆ. ನನ್ನ ಗೆಳೆಯ ತಿಮ್ಮಯ್ಯ ನಾಯ್ಕ ರವರು 10 ನೇ ತರಗತಿಯವರೆಗೆ ಓದಿರುತ್ತಾರೆ. ನಾವು ಪ್ರಯಾಣಿಸುತ್ತಿದ್ದ ವಾಹನದ ಮಾಲೀಕನ ಹೆಸರು ರೋಹಿದಾಸ ನಾಗಪ್ಪ ನಾಯ್ಕ ಎಂದು ಇರುತ್ತದೆ. ಅವರು ಬೆಂಗಳೂರಿನಲ್ಲಿ ವಾಸಿಸುತ್ತಾರೆ. ಸದರಿಯವರಿಗೆ ಅಪಘಾತದ ವಿಷಯವನ್ನು 2 ದಿನಗಳ ನಂತರ ತಿಳಿಸಿರುತ್ತೇವೆ. ಅಪಘಾತವಾದ ತಕ್ಷಣ ಪೊಲೀಸರಿಗೆ ತಿಳಿಸಬೇಕಾಗುತ್ತದೆ ಎಂದು ನನಗೆ ಜ್ಞಾನ ಇರುತ್ತದೆ. ಅಪಘಾತದ ಸಂಬಂಧ ಪಿರ್ಯಾದಿಯನ್ನು ನಾನೇ ನೀಡಿರುತ್ತೇನೆ. ಲೈಫ್ ಕೇರ್ ಆಸ್ಪತ್ರೆಯಲ್ಲಿ ನಾನು 4 ದಿನಗಳ ವರೆಗೆ ಒಳರೋಗಿಯಾಗಿ ಚಿಕಿತ್ಸೆ ಪಡೆದಿರುತ್ತೇನೆ. ನಾನು ಪ್ರಯಾಣಿಸುತ್ತಿದ್ದ ವಾಹನದ ಚಾಲಕನಿಗೆ ಡಿ.ಎಲ್ ಇರಲಿಲ್ಲ ಎಂದರೆ ಸರಿಯಲ್ಲ. ಸದರಿ ವಾಹನಕ್ಕೆ ಹಿಂಬದಿ ಸವಾರನಿಗೆ ವಿಮಾ ಪಾಲಿಸಿ ಇರಲಿಲ್ಲ ಎಂದರೆ ಸರಿಯಲ್ಲ. ನಾನು ಅಪಘಾತದ ಸಮಯದಲ್ಲಿ ಚಾಲಕ ವೃತ್ತಿ ಮಾಡುತ್ತಿದ್ದೆ, ಅದರ ದಾಖಲೆ ಡಿ.ಎಲ್.ನ್ನು ಹಾಜರುಪಡಿಸಲು ನನಗೆ ಯಾವುದೇ ತೊಂದರೆ ಇರುವುದಿಲ್ಲ.

ನಾನು ನೂರಿ ಫಿಷರೀಶ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದೆ ಎಂದು ತೋರಿಸಲು ಯಾವುದೇ ದಾಖಲೆ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಅಪಘಾತದ ಸಮಯದಲ್ಲಿ ಮೇಲೆ ಹೇಳಿದ ಕಂಪನಿಯಲ್ಲಿ ಕೆಲಸ ಮಾಡಿ, ತಿಂಗಳಿಗೆ ರೂ.30,000/- ಆದಾಯ ಗಳಿಸುತ್ತಿದ್ದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ಯಾವುದೇ ತೀವ್ರ ಸ್ವರೂಪದ ಗಾಯವಾಗಿಲ್ಲ ಎಂದರೆ ಸರಿಯಲ್ಲ. ವೈದ್ಯರ ಮೇಲೆ ಪ್ರಭಾವ ಬೀರಿ ನಿಪಿ-8 ನ್ನು ಪಡೆದು ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಿಂದ ನಾನು ಒಳರೋಗಿಯಾಗಿ ಚಿಕಿತ್ಸೆ ಪಡೆದಿಲ್ಲ ಎಂದರೆ ಸರಿಯಲ್ಲ. ಅರ್ಜಿಯಲ್ಲಿ ಮತ್ತು ಪ್ರಮಾಣ ಪತ್ರದಲ್ಲಿ ಹೇಳಿದಂತೆ ಹಣ ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ಆದಾಯದಲ್ಲಿ ಯಾವುದೇ ನಷ್ಟವಾಗಿಲ್ಲ ಎಂದರೆ ಸರಿಯಲ್ಲ. ನಿಪಿ-14 ರಲ್ಲಿ ತೋರಿಸಿದ ವೆಚ್ಚವನ್ನು ನಾನು ಆಸ್ಪತ್ರೆಯಲ್ಲಿ ಭರಿಸಿಲ್ಲ ಎಂದರೆ ಸರಿಯಲ್ಲ. ಬಾಡಿಗೆ ವಾಹನಕ್ಕೆ ಮತ್ತು ನನ್ನನ್ನು ನೋಡಿಕೊಳ್ಳಲು ರೂ.12,000/- ಖರ್ಚು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಆಸ್ಪತ್ರೆಗೆ ಪುನಃ ಹೋಗಿ ಹೊರರೋಗಿಯಾಗಿ ಚಿಕಿತ್ಸೆ ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ, ಮತ್ತು

ನಾನು ಹೇಳಿದಷ್ಟು ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಅಪಘಾತದ ಸಮಯದಲ್ಲಿ ನನಗೆ 40 ವರ್ಷಕ್ಕಿಂತ ಹೆಚ್ಚಿನ ವಯಸ್ಸಾಗಿದ್ದು, ಆದ್ದರಿಂದ ವಯಸ್ಸನ್ನು ತೋರಿಸಲು ದಾಖಲೆ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಅಪಘಾತವಾದ ಸಮಯದಲ್ಲಿ ನಾನು ಪ್ರಯಾಣಿಸುತ್ತಿದ್ದ ವಾಹನ ಚಾಲಕನಿಗೆ ಚಾಲನಾ ಪರವಾನಿಗೆ ಮತ್ತು ವಾಹನಕ್ಕೆ ಫಿಟ್‌ನೆಸ್ ಸರ್ಟಿಫಿಕೇಟು ಇರಲಿಲ್ಲ ಎಂದರೆ ಸರಿಯಲ್ಲ. ಆದ್ದರಿಂದ 2ನೇ ಎದ್ರುದಾರ ನಾನು ಹೇಳಿದಂತೆ ಪರಿಹಾರ ಕೊಡಲು ಬಾಧ್ಯಸ್ಥನಾಗುವುದಿಲ್ಲ ಎಂದರೆ ಸರಿಯಲ್ಲ.

**(ತೆ.ನ್ಯಾದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಿಸಲಾಯಿತು)**

**ಓ ಹೇ ಕೇ ಸರಿ ಇದೆ.**

*Sd/-*

**ಮೆಂಬರ್ ಎಡಿಶನಲ್ ಎಂಎಸಿಟಿ ಮತ್ತು**
**ಹಿರಿಯ ಸಿವಿಲ್ ನ್ಯಾಯಾಧೀಶರು, ಭಟ್ಕಳ.**